ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 29-6-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಕರ್ನಾಟಕ ವಿಧಾನ ಪರಿಷತ್ತಿಗೆ ನೂತನವಾಗಿ ಆಯ್ಕೆಯಾದ ನೂತನ ಸದಸ್ಯರುಗಳಿಗೆ ಎರಡು ದಿನದ ತರಬೇತಿ ಕಾರ್ಯಕ್ರಮ:<br><br>ಉದ್ಘಾಟನೆ:<br><br>ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು,<br>ಕರ್ನಾಟಕ ಸರ್ಕಾರ | 30-06-2016<br>ಗುರುವಾರ<br><br>ಬೆಳಿಗ್ಗೆ<br>10-30 ಗಂಟೆಗೆ | ಕೊಠಡಿ ಸಂಖ್ಯೆ 419,<br>ಸಮ್ಮೇಳನ ಸಭಾಂಗಣ,<br>ನಾಲ್ಕನೇ ಮಹಡಿ, ವಿಕಾಸಸೌಧ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# "ಬೆಳ್ಳಿಹೆಜ್ಜೆ" ಯಲ್ಲಿ ನಟಿ ಸುಧಾರಾಣಿ

ಬೆಂಗಳೂರು, ಜೂನ್ 29 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಜುಲೈ 2 ರಂದು ಸಂಜೆ 5-00 ಗಂಟೆಗೆ ಬೆಂಗಳೂರಿನ ಕುಮಾರಪಾರ್ಕ್ ರಸ್ತೆಯಲ್ಲಿರುವ ಗಾಂಧೀಭವನದ ಮಹದೇವ ದೇಸಾಯಿ ಸಭಾಂಗಣಲ್ಲಿ ಕನ್ನಡ ಚಲನಚಿತ್ರರಂಗದ ಖ್ಯಾತ ತಾರೆ ಶ್ರೀಮತಿ ಸುಧಾರಾಣಿ ಅವರ "ಬೆಳ್ಳಿಹೆಜ್ಜೆ" ಕಾರ್ಯಕ್ರಮವನ್ನು ಏರ್ಪಡಿಸಿದೆ ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿಯ ರಿಜಿಸ್ಟ್ರಾರ್ ಶ್ರೀ ಹೆಚ್.ಬಿ. ದಿನೇಶ್ ತಿಳಿಸಿದ್ದಾರೆ.

ಕರ್ನಾಟಕ ಚಲನಚಿತ್ರ ಅಕಾಡೆಮಿ ಮಾಜಿ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯರಾದ ಶ್ರೀಮತಿ ತಾರಾ ಅನುರಾಧ, ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್. ಆರ್. ವಿಶುಕುಮಾರ್, ಕನ್ನಡ ಚಲನಚಿತ್ರರಂಗದ ಹಿರಿಯ ನಿರ್ದೇಶಕ ಎಸ್. ಕೆ. ಭಗವಾನ್ ಹಾಗೂ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಅಧ್ಯಕ್ಷ ಸಾ. ರಾ. ಗೋವಿಂದು ಮುಖ್ಯ ಅತಿಥಿಗಳಾಗಿ

ಪಾಲ್ಗೊಳ್ಳುವರು. ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್.ವಿ. ರಾಜೇಂದ್ರಸಿಂಗ್ ಬಾಬು ಸಮಾರಂಭದ ಅಧ್ಯಕ್ಷತೆ ವಹಿಸುವರು ಎಂದು ಅವರು ತಿಳಿಸಿದ್ದಾರೆ.

ಬಾಬು:ಜಿಪಿಆರ್.

# ಮುಖ್ಯಮಂತ್ರಿಗಳ ಉದ್ಯೋಗ ಸೃಜನ ಯೋಜನೆ : ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಜೂನ್ 29 (ಕರ್ನಾಟಕ ವಾರ್ತೆ)

2016–17 ನೇ ಸಾಲಿನ ಮುಖ್ಯಮಂತ್ರಿಗಳ ಉದ್ಯೋಗ ಸೃಜನ ಯೋಜನೆ (ಎಇಎಂಇಜಿಪಿ) ಯಡಿಯಲ್ಲಿ ಗ್ರಾಮೀಣ ಪ್ರದೇಶದ ಯುವಕ–ಯುವತಿಯರು ಸೂಕ್ಷ್ಮ ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ತೇಜಿಸಿ ಅವರನ್ನು ಮೊದಲ ಪೀಳಿಗೆ ಉದ್ಯಮಿಗಳನ್ನಾಗಿ ಮಾಡಲು ಅರ್ಹ ಗ್ರಾಮೀಣ ಪ್ರದೇಶದ ಯುವಕ–ಯುವತಿಯರಿಂದ ಸಾಲ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಒಂದು ಕುಟುಂಬದಲ್ಲಿ ಒಬ್ಬ ವ್ಯಕ್ತಿಗೆ ಮಾತ್ರ ಅವಕಾಶವಿರುತ್ತದೆ. ಯಾವುದಾದರು ಬೇರೆ ಯೋಜನೆಗಳಲ್ಲಿ ಉದ್ದಿಮೆ ಸ್ಥಾಪನೆಗೆ ಸಾಲ ಸೌಲಭ್ಯ ಪಡೆದಿದ್ದಲ್ಲಿ ಈ ಯೋಜನೆಯಲ್ಲಿ ಅವಕಾಶವಿರುವುದಿಲ್ಲ.

ಅರ್ಜಿಗಳನ್ನು ಜುಲೈ 16 ರೊಳಗಾಗಿ ಆನ್ ಲೈನ್ (ಆನ್‌ಲೈನ್ ವಿಳಾಸ emegp.kar.nic.in) ಮುಖಾಂತರ ಸಲ್ಲಿಸುವುದು. ಹೆಚ್ಚಿನ ವಿವರಗಳಿಗೆ ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಬೆಂಗಳೂರು ನಗರ ಜಿಲ್ಲೆ ರಾಜಾಜಿನಗರ, ಕೈಗಾರಿಕಾ ವಸಾಹತು, ರಾಜಾಜಿನಗರ, ಬೆಂಗಳೂರು – 560 010 ಕಚೇರಿಯನ್ನು ಅಥವಾ ದೂರವಾಣಿ ಸಂಖ್ಯೆ 080–23501478 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಬಾಬು:ಜಿಪಿಆರ್.

# ಗ್ರಾಮದ ಅಭಿವೃದ್ಧಿ ದೇಶದ ಅಭಿವೃದ್ಧಿ

ಬೆಂಗಳೂರು, ಜೂನ್ 29 (ಕರ್ನಾಟಕ ವಾರ್ತೆ)

ಗಾಂಧಿಯವರು ಕನಸು ಕಂಡಂತೆ ನಮ್ಮ ದೇಶದ ಗ್ರಾಮಗಳು ಸಮಗ್ರ ಅಭಿವೃದ್ಧಿಯಾದರೆ ದೇಶದ ಅಭಿವೃದ್ಧಿಯಾಗುತ್ತದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ಸಚಿವ ಎಚ್. ಕೆ. ಪಾಟೀಲ್ ಅವರು ತಿಳಿಸಿದರು.

ಇಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನೂತನವಾಗಿ ಚುನಾಯಿತರಾದ ಜಿಲ್ಲಾ ಪಂಚಾಯತ್ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗಾಗಿ ನಡೆದ

ಸಮ್ಮೇಳನದಲ್ಲಿ ಪ್ರಾಸ್ತಾವಿಕ ನುಡಿ ನುಡಿಯುತ್ತಾ ರಾಜ್ಯ ಸರ್ಕಾರ ನಿಮಗೆ ಉತ್ತಮವಾದ ಅಧಿಕಾರ ನೀಡಿದೆ. ನೀವು ಎಲ್ಲರ ಪ್ರೀತಿಗೆ ಪಾತ್ರರಾಗಿ ಉತ್ತಮ ಕಾರ್ಯ ನಿರ್ವಹಿಸಬೇಕು ಎಂದ ಅವರು ತಮ್ಮ ಕರ್ತವ್ಯದ ಜೊತೆ ಹೊಣೆಗಾರಿಕೆಯನ್ನು ಅರಿತು ಕೆಲಸ ನಿರ್ವಹಿಸಬೇಕು ಎಂದು ತಿಳಿಸಿದರು.

ನಿಮ್ಮಿಂದ ಜನರ ಅಪಾರ ಅಪೇಕ್ಷೆ ಮತ್ತು ಸರ್ಕಾರಕ್ಕೆ ತುಂಬಾ ನಿರೀಕ್ಷೆಯಿದೆ. ನಮ್ಮ ಸಂವಿಧಾನ ಕಾನೂನಿನ 73ನೇ ತಿದ್ದುಪಡಿಯಲ್ಲಿ ಸಹ ನಿಮಗೆ ಹೆಚ್ಚು ಅಧಿಕಾರ ನೀಡಿದೆ. ಆದ್ದರಿಂದ ನೀವು ಉತ್ತಮ ರೀತಿಯಲ್ಲಿ ಜನಪರ ಕೆಲಸಮಾಡಿ ದೇಶದ ಅಭಿವೃದ್ಧಿ ಮತ್ತು ಸರ್ಕಾರಕ್ಕೆ ಒಳ್ಳೆಯ ಹೆಸರು ತರಬೇಕೆಂದರು.

ಈ ಕಾರ್ಯಕ್ರಮದಲ್ಲಿ ಅಭಿವೃದ್ಧಿ ಆಯುಕ್ತೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ನಾಗಲಾಂಬಿಕಾದೇವಿ ಇತರೆ ಅಧಿಕಾರಿಗಳು ಸಮ್ಮೇಳನದಲ್ಲಿ ಉಪಸ್ಥಿತರಿದ್ದರು.

ವಿಜಯಾನಂದ/ಜಿಪಿಆರ್.

# <u>ಅರ್ಜಿ ಆಹ್ವಾನ</u>

**ಬೆಂಗಳೂರು, ಜೂನ್ 29 (ಕರ್ನಾಟಕ ವಾರ್ತೆ)**

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಹೊಸೂರು ರಸ್ತೆ, ಬೆಂಗಳೂರು – 560 079 ಇಲ್ಲಿ 2016–17 ನೇ ಸಾಲಿನ ಪ್ರವೇಶಾತಿಗಾಗಿ ಐ.ಎಂ.ಸಿ. ಕೋಟಾ ಅಡಿಯಲ್ಲಿ ಅರ್ಜಿಗಳನ್ನು ದಿನಾಂಕ 05–07–2016 ರವರೆಗೆ ವಿತರಿಸಲಾಗುವುದು. ಹಾಗೂ ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಜುಲೈ 5 ಅಂತಿಮ ದಿನವಾಗಿದೆ. ಜುಲೈ 13 ರಂದು ಪ್ರವೇಶಾತಿಗಾಗಿ ಸಮಾಲೋಚನೆ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಪ್ರಾಚಾರ್ಯರನ್ನು ದೂರವಾಣಿ ಸಂಖ್ಯೆ 080–26562307 ರಲ್ಲಿ ಸಂಪರ್ಕಿಸಬಹುದು.

ಬಾಬು:ಜಿಪಿಆರ್.

# <u>ಟೀಯೆಸ್ಸಾರ್, ಮೊಹರೆ ಹಣಮಂತರಾಯ ಸ್ಮಾರಕ ಹಾಗೂ ಅಭಿವೃದ್ಧಿ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿ ಪ್ರದಾನ ಸಮಾರಂಭ</u>

**ಬೆಂಗಳೂರು, ಜೂನ್ 29 (ಕರ್ನಾಟಕ ವಾರ್ತೆ)**

2014–15 ನೇ ಸಾಲಿನ ದಿ. ಟಿ.ಎಸ್.ರಾಮಚಂದ್ರ ರಾವ್ ಹಾಗೂ ದಿ. ಮೊಹರೆ ಹಣಮಂತರಾಯ ಸ್ಮಾರಕ ಪ್ರಶಸ್ತಿಗಳು ಹಾಗೂ ಅಭಿವೃದ್ಧಿ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳ ಪ್ರದಾನ ಸಮಾರಂಭವು ಜುಲೈ 1 ರ ಶುಕ್ರವಾರ ಸಂಜೆ 5–00 ಗಂಟೆಗೆ ಬೆಂಗಳೂರು ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ನಡೆಯಲಿದೆ. ರಾಜ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯನವರು ಈ ಪ್ರಶಸ್ತಿಗಳನ್ನು ಪ್ರದಾನ ಮಾಡುವರು.

ಸಮಾರಂಭದ ಅಧ್ಯಕ್ಷತೆಯನ್ನು ರಾಜ್ಯ ನಗರಾಭಿವೃದ್ಧಿ ಹಾಗೂ ಹಜ್ ಖಾತೆ ಸಚಿವ ಆರ್. ರೋಷನ್ ಬೇಗ್ ಅವರು ವಹಿಸುವರು. ಪ್ರಧಾನ ಭಾಷಣಕಾರರಾಗಿ ಹಿರಿಯ ಪತ್ರಕರ್ತರು ಹಾಗೂ ಮ್ಯಾಗ್ಸೇಸೆ ಪ್ರಶಸ್ತಿ ವಿಜೇತ ಪಿ. ಸಾಯಿನಾಥ್ ಪ್ರಧಾನ ಭಾಷಣ ಮಾಡುವರು.

ಸಮಾರಂಭದ ಮುಖ್ಯ ಅತಿಥಿಗಳಾಗಿ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಖಾತೆ ಸಚಿವ ಕೆ.ಜೆ. ಜಾರ್ಜ್, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಬೆಂಗಳೂರು ಕೇಂದ್ರ ಲೋಕಸಭಾ ಸದಸ್ಯ ಪಿ.ಸಿ. ಮೋಹನ್ ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಾಧೀಶರು ಹಾಗೂ ಟಿ.ಎಸ್.ಆರ್. ಮತ್ತು ಮೊಹರೆ ಹಣಮಂತರಾಯ ಪ್ರಶಸ್ತಿ ಆಯ್ಕೆ ಸಮಿತಿಯ ಅಧ್ಯಕ್ಷರಾದ ನ್ಯಾಯಮೂರ್ತಿ ಹೆಚ್. ಎನ್. ನಾಗಮೋಹನ್‌ದಾಸ್ ಅವರು ಪಾಲ್ಗೊಳ್ಳುವರು.

2014 ಮತ್ತು 2015 ನೇ ಸಾಲಿನಲ್ಲಿ ಟೀಯೆಸ್ಸಾರ್ ಪ್ರಶಸ್ತಿ ಪಡೆದವರು ಗಂಗಾಧರ್ ಮೊದಲಿಯಾರ್, ಸನತ್‌ಕುಮಾರ್ ಬೆಳಗಲಿ, ಮೊಹರೆ ಹಣಮಂತರಾಯ ಪ್ರಶಸ್ತಿ ಪಡೆದವರು ಬಸವರಾಜಸ್ವಾಮಿ ಮತ್ತು ಪಿ. ವೆಂಕಟೇಶ್, ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿ ಪಡೆದವರು ಜಿ. ಎನ್. ಮೋಹನ್, ಶೇಷಮೂರ್ತಿ ಅವಧಾನಿ ಹಾಗೂ ಪರಿಸರ ಪತ್ರಿಕೋದ್ಯಮ ಪ್ರಶಸ್ತಿ ಪಡೆದವರು ಗಾಣದಾಳು ಶ್ರೀಕಂಠ ಮತ್ತು ಡಾ. ಎನ್. ಜಗದೀಶ್ ಕೊಪ್ಪ.

ಬಾಬು: ಕೆಎಂ